# ಕರ್ನಾಟಕ ವಿಧಾನ ಪರಿಷತ್ತು

**ನೂರ ಮೂವತ್ತೊಂಬತ್ತನೆಯ ಅಧಿವೇಶನ**

**ಕಾರ್ಯಕಲಾಪಗಳ ಪಟ್ಟಿ**

**ಶನಿವಾರ, 12ನೇ ಅಕ್ಟೋಬರ್, 2019**
**(ಸಮಯ: ಬೆಳಗ್ಗೆ 11.00 ಗಂಟೆಗೆ)**

******

## 01. ಸಭೆಯ ಮುಂದಿಡಲಾಗುವ ಕಾಗದ ಪತ್ರಗಳು

(ಮಾನ್ಯ ಸದಸ್ಯರುಗಳಿಗೆ ಈಗಾಗಲೇ ಒದಗಿಸಲಾಗಿರುವ ಮೂರನೆಯ ಮತ್ತು ನಾಲ್ಕನೆಯ ಪಟ್ಟಿಗಳ ರೀತ್ಯಾ)

## 02. ನಿಯಮ 68ರ ಮೇರೆಗೆ ಸಾರ್ವಜನಿಕ ಮಹತ್ವದ ವಿಷಯದ ಮೇಲಿನ ಮುಂದುವರೆದ ಚರ್ಚೆ ಹಾಗೂ ಸರ್ಕಾರದಿಂದ ಉತ್ತರ

| | |
|---|---|
| **ಶ್ರೀಯುತರುಗಳಾದ:**<br>**ಎಸ್.ಆರ್. ಪಾಟೀಲ್, ವಿ.ಪ.ನಾ.**<br>**ಅಲ್ಲಂ ವೀರಭದ್ರಪ್ಪ**<br>**ಎನ್.ಎಸ್.ಭೋಸ್‌ರಾಜು**<br>**ಶರಣಪ್ಪ ಮಟ್ಟೂರ**<br>**ಬಸವರಾಜ ಶಿವಲಿಂಗಪ್ಪ ಹೊರಟ್ಟಿ**<br>**ಕೆ.ಟಿ.ಶ್ರೀಕಂಠೇಗೌಡ**<br>**ಹಾಗೂ ಇತರರು** | ರಾಜ್ಯದಲ್ಲಿ ಭಾರಿ ಮಳೆ ಮತ್ತು ಪ್ರವಾಹದಿಂದಾಗಿ ಉಂಟಾಗಿರುವ ಅನಾಹುತದಿಂದ ಸಂಕಷ್ಟಕ್ಕೀಡಾಗಿರುವ ಜನರಿಗೆ ಪರಿಹಾರ ಒದಗಿಸುವಲ್ಲಿ ಸರ್ಕಾರವು ವಿಫಲವಾಗಿರುವ ಬಗ್ಗೆ. |

## 03. ಗಮನ ಸೆಳೆಯುವ ಸೂಚನೆಗಳು

ಅ) **ಶ್ರೀ ಕೆ.ಸಿ. ಕೊಂಡಯ್ಯ** ಅವರು ಹಿಂದುಳಿದ ವರ್ಗಗಳ ಆಯೋಗದ ವತಿಯಿಂದ ಜಾತಿಗಣತಿಯ ಸಮೀಕ್ಷೆಯನ್ನು ನಡೆಸಲಾಗಿದ್ದು, ವರದಿಯನ್ನು ಮಂಡಿಸದಿರುವ ಬಗ್ಗೆ **ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರ** ಗಮನ ಸೆಳೆಯುವುದು

ಆ) **ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ** ಅವರು ಅನುದಾನ ರಹಿತ ಆಂಗ್ಲ ಮಾಧ್ಯಮ ಶಾಲೆಗಳ ಸಿಬ್ಬಂದಿಯವರಿಗೆ ಸಿಗಬೇಕಾದ ಕನಿಷ್ಠ ಸೌಲಭ್ಯಗಳನ್ನು ಒದಗಿಸದಿರುವ ಶಿಕ್ಷಣ ಸಂಸ್ಥೆಗಳ ಮಾನ್ಯತೆಯನ್ನು ರದ್ದುಪಡಿಸುವ ಬಗ್ಗೆ **ಮಾನ್ಯ ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಹಾಗೂ ಸಕಾಲ, ಕಾರ್ಮಿಕ ಸಚಿವರ** ಗಮನ ಸೆಳೆಯುವುದು.

......2

ಇ) **ಶ್ರೀ ಕೆ.ಟಿ ಶ್ರೀಕಂಠೇಗೌಡ** ಅವರು ರಾಜ್ಯದಲ್ಲಿ ಗಂಗಾ ಕಲ್ಯಾಣ ಯೋಜನೆಯಡಿಯಲ್ಲಿ ಕೊರೆಯಿಸಲಾದ ಅನೇಕ ಕೊಳವೆ ಬಾವಿಗಳಿಗೆ ಇದುವರೆವಿಗೂ ವಿದ್ಯುತ್ ಸಂಪರ್ಕವನ್ನು ಒದಗಿಸದೆ ಇರುವ ಬಗ್ಗೆ **ಮಾನ್ಯ ಉಪ ಮುಖ್ಯಮಂತ್ರಿಗಳು ಮತ್ತು ಲೋಕೋಪಯೋಗಿ, ಸಮಾಜ ಕಲ್ಯಾಣ ಸಚಿವರ** ಗಮನ ಸೆಳೆಯುವುದು

ಈ) **ಶ್ರೀ ಅ.ದೇವೇಗೌಡ** ಅವರು ರಾಜ್ಯ ಒಕ್ಕಲಿಗರ ಸಂಘದಲ್ಲಿ ನಡೆದಿರುವ ಅಧಿಕಾರ ದುರುಪಯೋಗ, ಕಾನೂನು ಬಾಹಿರ ಕೆಲಸ ಮತ್ತು ಅವ್ಯವಹಾರಗಳ ಬಗ್ಗೆ ಮಾನ್ಯ **ಗೃಹ ಮತ್ತು ಸಹಕಾರ ಸಚಿವರ** ಗಮನ ಸೆಳೆಯುವುದು.

## 04. ನಿಯಮ 330ರ ಮೇರೆಗೆ

ಅ) **ಶ್ರೀ ಮರಿತಿಬ್ಬೇಗೌಡ** ಅವರು ಬೆಂಗಳೂರು ನಗರದ ಎಲೆಕ್ಟ್ರಾನಿಕ್ ಸಿಟಿ ಪ್ರಾದೇಶಿಕ ಸಾರಿಗೆ ಕಛೇರಿಯಲ್ಲಿ 2015ನೇ ಸಾಲಿನಿಂದ ಭಾರತ್-03 ವಾಯುಮಾಲಿನ್ಯ ನಾಲ್ಕು ಚಕ್ರದ ಸಾವಿರಾರು ವಾಹನಗಳನ್ನು ಕಾನೂನು ಬಾಹಿರವಾಗಿ ಅಧಿಕಾರಿಗಳು ಶಾಮೀಲಾಗಿ ನೋಂದಣಿ ಮಾಡಿರುವುದಲ್ಲದೆ, ಇಲಾಖೆಯ ಬೊಕ್ಕಸಕ್ಕೆ ಲಕ್ಷಾಂತರ ರೂಪಾಯಿಗಳ ನಷ್ಟವುಂಟು ಮಾಡಿರುವ ಬಗ್ಗೆ ಪ್ರಸ್ತಾಪಿಸುವುದು.

ಆ) **ಶ್ರೀ ಐವನ್ ಡಿ' ಸೋಜಾ** ಅವರು ದಕ್ಷಿಣ ಕನ್ನಡ ಜಿಲ್ಲೆಯ ಹಳೆಯಂಗಡಿ ಗ್ರಾಮ ಪಂಚಾಯತಿ ಕಾನೂನು ಬದ್ಧವಾಗಿ ಕಾರ್ಯನಿರ್ವಹಿಸುತ್ತಿದ್ದರೂ ಜಿಲ್ಲಾ ಪಂಚಾಯತ್ ಬರ್ಕಾಸ್ತು ಮಾಡಲು ನಿರ್ಣಯ ಕೈಗೊಂಡಿರುವ ಬಗ್ಗೆ ಪ್ರಸ್ತಾಪಿಸುವುದು.

ಇ) **ಶ್ರೀ ಪಿ.ಆರ್. ರಮೇಶ್** ಅವರು ಬೃಹತ್ ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಭೂಪರಿವರ್ತನೆಯಾಗದೆ ಅನಧಿಕೃತವಾಗಿ ನಿರ್ಮಿಸಿರುವ ರೆವಿನ್ಯೂ ನಿವೇಶನಗಳಿಗೆ ಸುಧಾರಣಾ ವೆಚ್ಚ/ಮೇಲ್ವಾಟು ವೆಚ್ಚ ಪಾವತಿಸಿಕೊಂಡು ಸದರಿ ನಿವೇಶನಗಳನ್ನು ಸಕ್ರಮಗೊಳಿಸುವ ಯೋಜನೆ ಬಗ್ಗೆ ಪ್ರಸ್ತಾಪಿಸುವುದು.

ಈ) **ಶ್ರೀಯುತರುಗಳಾದ ಎನ್.ಎಸ್. ಭೋಸ್‌ರಾಜು, ಶರಣಪ್ಪ ಮಟ್ಟೂರು ಮತ್ತು ಬಸವರಾಜ ಪಾಟೀಲ್ ಇಟಗಿ** ಅವರುಗಳು ರಾಯಚೂರು ಜಿಲ್ಲೆಯಲ್ಲಿ ರಾಯಚೂರು ವಿಶ್ವವಿದ್ಯಾಲಯವನ್ನು ಪ್ರಾರಂಭಿಸಲು ವಿಳಂಬವಾಗಿರುವ ಬಗ್ಗೆ ಪ್ರಸ್ತಾಪಿಸುವುದು.

**ಕೆ.ಆರ್. ಮಹಾಲಕ್ಷ್ಮಿ**
**ಕಾರ್ಯದರ್ಶಿ**

---

ಪ್ರತಿ ದಿನದ ವಿಧಾನ ಪರಿಷತ್ತಿನ ಕಾರ್ಯಕಲಾಪಗಳ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿಯೂ ಸಹ ಪಡೆದುಕೊಳ್ಳಬಹುದು.

**www.kla.kar.nic.in/council.htm**